<u>ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,</u>

<u>ಹಗರಿಬೊಮ್ಮನಹಳ್ಳಿ</u>

ಸಿ ಸಿ ನಂ. **836/2015**

<u>ಸಾಕ್ಷಿಗೆ ದಿನಾಂಕ 01-08-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

C.W.: 8 P.W.: 7

| | | |
|---|---|---|
| ಹೆಸರು | : | ಬೆಂಚಿ ಸುರೇಶ್ |
| ತಂದೆಯ ಹೆಸರು | : | ರಾಮಾನಾಯ್ಕ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ದಾಸರಹಳ್ಳಿ ತಾಂಡ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>

ನಾನು ಆರೋಪಿತರನ್ನು ನೋಡಿಲ್ಲ, ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಯಾವುದೇ ಮು ಮಾಲುಗಳನ್ನು ಮತ್ತು ಹಣವನ್ನು ನನ್ನ ಸಮಕ್ಷಮದಲ್ಲಿ ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಜಪ್ತುಪಂಚನಾಮೆಯಾಗಿದ್ದು ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿ-**10** ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**10** ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆನ್ನುವುದು ನನಗೆ ಗೊತ್ತಿಲ್ಲ. ಈಗ ಸುಮಾರು **7-8** ವರ್ಷದ ಹಿಂದೆ ನಾನು ಇಟಗಿ ಪೋಲೀಸ್ ಠಾಣೆಯಲ್ಲಿ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-</u>

ದಿಃ04-06-2015 ರಂದು ಸಂಜೆ 7 ಗಂಟೆ ಸಮಯದಲ್ಲಿ ನನ್ನ ಮತ್ತು ಚಾಸಾ-9 ರವರ ಸಮಕ್ಷಮ ಇಟಗಿ ಪೋಲೀಸ್ ಠಾಣೆಯ ಗಣಕಯಂತ್ರದ ಕೊಠಡಿಯಲ್ಲಿ ಚಾಸಾ-17 ರವರು ನೋಡಿ ಗುರುತಿಸಿದ ಚಾಸಾ-1 ರವರಿಗೆ ಸಂಬಂಧಿಸಿದ ಸ್ವತ್ತುಗಳಾದ 2 ಮೊಬೈಲ್ ಫೋನುಗಳು, 2 ಕೈಗಡಿಯಾರಗಳು ಮತ್ತು ನಗದು ಹಣ ರೂ.1 ಲಕ್ಷಗಳನ್ನು ನಿಪಿ-10 ರಂತೆ ಪಂಚನಾಮೆ ಮೂಲಕ ಅಮಾನತ್ತುಪಡಿಸಿಕೊಂಡರು ಆ ಸಮಯದಲ್ಲಿ ನಾನು ಮತ್ತು ಚಾಸಾ-9 ರವರು ಪಂಚನಾಮೆಯಲ್ಲಿರುವ ವಿಚಾರ ತಿಳಿದುಕೊಂಡು ಸದರಿ ಸ್ಥಳದಲ್ಲಿ ಸಹಿ ಮಾಡಿರುತ್ತೇವೆಂದರೆ

ಸರಿಯಲ್ಲ. ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ